ಪಿ.ಹೆಚ್.ಸಿ. ಕೇಂದ್ರವನ್ನು ಮಂಜೂರು ಮಾಡುವುದು

1568(1359); ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ತಾಲ್ಲೂಕು ನಂದಿಪುರ ಗ್ರಾಮಕ್ಕೆ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಮಂಜೂರಾತಿ ನೀಡಲಾಗುವುದೇ;

ಇ) ನಂದಿಪುರ ಗ್ರಾಮವು ಹೆಚ್ಚಿನ ಜನಸಂಖ್ಯೆಯನ್ನು ಹೊಂದಿದ್ದು, ಸುತ್ತ-ಮುತ್ತಲ ಗ್ರಾಮಗಳಿಗೆ ಕೇಂದ್ರ ಸ್ಥಾನವಾಗಿರುವುದರಿಂದ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸುವುದರಿಂದ ಗ್ರಾಮೀಣ ಜನತೆಗೆ ಅನುಕೂಲವಾಗುವುದಿಲ್ಲವೇ;

ಈ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡದ ನಿರ್ಮಾಣಕ್ಕೆ ಅನುದಾನವನ್ನು ಬಿಡುಗಡೆ ಮಾಡಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗುವುದೇ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ), ಆ), ಇ) ಮತ್ತು ಈ) ಇಲ್ಲಾ

ಹಗರಿಬೊಮ್ಮನಹಳ್ಳಿ ತಾಲ್ಲೂಕಿನ 2011ರ ಗ್ರಾಮೀಣ ಜನಸಂಖ್ಯೆ: 188238 ಇದ್ದು, 6 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದ್ದು 8 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಲಿಯಾಗಿ ಕಾರ್ಯನಿರ್ವಹಿಸುತ್ತಿವೆ. 2 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹೆಚ್ಚುವರಿಯಾಗಿ ಕಾರ್ಯ ನಿರ್ವಹಿಸುತ್ತಿವೆ. ಮಾರ್ಗಸೂಚಿಯನ್ವಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿಗೆ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿಗೆ ಅವಕಾಶವಿರುವುದಿಲ್ಲ.

ರಾಜ್ಯದಲ್ಲಿ ಅವಶ್ಯಕತೆಗಿಂತ ಹೆಚ್ಚುವರಿಯಾಗಿ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದ್ದು, ಹೊಸದಾಗಿ ಮಂಜೂರು ಮಾಡಲ್ಪಟ್ಟ/ ಮೇಲ್ದರ್ಜೆಗೇರಿಸಲ್ಪಟ್ಟ ಆಸ್ಪತ್ರೆಗಳ ಹಾಸಿಗೆ ಸಾಮರ್ಥ್ಯಕ್ಕೆ ಅನುಗುಣವಾಗಿ ಅವಶ್ಯವಿರುವ ಔಷಧಿಗಳನ್ನು ಪೂರೈಸಲಾಗುತ್ತಿದ್ದು, ಅವುಗಳಿಗೆ ಖಾಯಂ ಕಟ್ಟಡಗಳನ್ನು ಮತ್ತು ಸಿಬ್ಬಂದಿಯನ್ನು ನಿಗದಿತ ಮಟ್ಟಕ್ಕೆ ಒದಗಿಸಲಾಗಿಲ್ಲ. ಅಲ್ಲದೇ ಈಗಾಗಲೇ ಸ್ಥಾಪಿಸಿರುವ ಸಮುದಾಯ ಆರೋಗ್ಯ ಕೇಂದ್ರ ಮತ್ತು ಮೇಲ್ಪಟ್ಟ ಆಸ್ಪತ್ರೆಗಳಿಗೆ ತಜ್ಞ ವೈದ್ಯರ ಅವಶ್ಯಕತೆ ಇರುವುದರಿಂದ ಈ ಕೊರತೆ ನಿವಾರಿಸಲು ಪ್ರಥಮ ಆದ್ಯತೆ ನೀಡಲಾಗುತ್ತಿದೆ.

ಸಿಬ್ಬಂದಿಗಳ ಕೊರತೆ

1569(1950); ಶ್ರೀ ಭೀಮಾ ನಾಯ್ಕ ಎಸ್. (ಹಗರಿ ಬೊಮ್ಮನಹಳ್ಳಿ)

ಅ) ರಾಜ್ಯದ ಗ್ರಾಮೀಣ ಪ್ರದೇಶಗಳ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರುಗಳ ಇತರೆ ವೈದ್ಯಕೀಯ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಕೊರತೆ ಇರುವ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಗ್ರಾಮೀಣ ಪ್ರದೇಶಗಳಲ್ಲಿ ಸಕಾಲಕ್ಕೆ ವೈದ್ಯಕೀಯ ಸೇವೆ ಲಭಿಸದೆ ರೋಗಿಗಳು ಮೃತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ